12-12-24

(14)



**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ|| ತಳವಾರ ಸಾಬಣ್ಣಾ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನಾ ಪತ್ರಕ್ಕೆ ಉತ್ತರಿಸುವ ಕುರಿತು.**

**ಪ್ರಶ್ನೆ**

2006ರ ಪೂರ್ವ ನೇಮಕವಾಗಿ, ತದನಂತರ ಅನುದಾನಕ್ಕೊಳಪಟ್ಟು, ಹಳೆ ಪಿಂಚಣಿ ಸೌಲಭ್ಯದಿಂದ ವಂಚಿತರಾದ ಅನುದಾನಿತ ಶಾಲಾ-ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ನೌಕರರ ಪಿಂಚಣಿ ಸಮಸ್ಯೆಯ ಕುರಿತು.

**ಉತ್ತರ**

ದಿನಾಂಕ: 01.04.2006ರ ನಂತರ ನೇಮಕಾತಿ ಹೊಂದಿದ ಸಿಬ್ಬಂದಿಗಳಿಗೆ ಕಡ್ಡಾಯವಾಗಿ ಸರ್ಕಾರದ ಆದೇಶ ಸಂಖ್ಯೆ:FD (SPL)04 PET 2005 ದಿನಾಂಕ: 01.04.2006ರನ್ವಯ ನೂತನ ಪಿಂಚಣಿ ಯೋಜನೆ ಅನ್ವಯವಾಗುತ್ತದೆ. ಸರ್ಕಾರದ ಆದೇಶ ಸಂಖ್ಯೆ:ಆಇ 34 ಪಿಇಎನ್ 2018 ರಲ್ಲಿ ಅಂಶದಾಯಿ ಪಿಂಚಣಿ ಕೊಡುಗೆ ಯೋಜನೆಯಡಿ ಬರುವ ಸರ್ಕಾರಿ ನೌಕರರಿಗೆ ನಿವೃತ್ತಿ ಉಪದಾನ, ಮರಣ ಮತ್ತು ಕುಟುಂಬ ಪಿಂಚಣಿಯನ್ನು ವಿಸ್ತರಿಸಲಾಗಿದೆ.

ದಿನಾಂಕ:01.04.2006ರ ಪಿಂಚಣಿ ನೀತಿಯಲ್ಲಿ ಅನುದಾನಿತ ಶಾಲೆಗಳ ನೌಕರರಿಗೆ ಪಿಂಚಣಿ ಒದಗಿಸುವ ಕುರಿತು ಮೇಲ್ಕಂಡ ಸರ್ಕಾರದ ಆದೇಶದ ಕ್ರಮ ಸಂಖ್ಯೆ: 8ರಲ್ಲಿ ಈ ಕೆಳಗಿನಂತೆ ಆದೇಶಿಸಿದೆ.

...(8) ಸಹಾಯಾನುದಾನದ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಗೊತ್ತು ಮಾಡಿದ ಪ್ರಯೋಜನ ಪಿಂಚಣಿಯನ್ನು ದಿನಾಂಕ: 01.04.2006ರಂದು ಅಥವಾ ಅದರ ತರುವಾಯ ಸೇರುವ ಹೊಸದಾಗಿ ನೇಮಕಗೊಂಡ ಸಿಬ್ಬಂದಿಗೆ ನಿಲ್ಲಿಸಿಬಿಡತಕ್ಕದ್ದು. ನೂತನ ನಿಗಧಿತ ವಂತಿಗೆ ಪಿಂಚಣಿ ಯೋಜನೆಯು, ಆಯ್ಕೆಯ ಅವಕಾಶದ ಆಧಾರದ ಮೇಲೆ ನೌಕರನಿಗೆ ನಿಯೋಜಕನಿಗೆ ಅನ್ವಯವಾಗತಕ್ಕದ್ದು ಮತ್ತು ಮತ್ತು ಆಯ್ಕೆಯ ಅವಕಾಶವನ್ನು ಇಬ್ಬರಿಂದಲೂ ಚಲಾಯಿಸತಕ್ಕದ್ದು, ಆದರೆ ನಿಯೋಜಕರ ವಂತಿಗೆಯನ್ನು ಸಂಬಂಧಪಟ್ಟ ಸಂಸ್ಥೆಗಳು ಭರಿಸತಕ್ಕದ್ದು. ಆದರೆ ರಾಜ್ಯ ಸರ್ಕಾರವಲ್ಲ. ಈ ಆದೇಶವು ದಿನಾಂಕ: 01.04.2006ರಿಂದ ಜಾರಿಗೆ ಬಂದಿರುತ್ತದೆ.

ದಿನಾಂಕ:01.04.2006ರ ನಂತರ ಅನುದಾನ ಸಹಿತ ಅನುಮೋದನೆಗೊಂಡ ಅನುದಾನಿತ ಖಾಸಗಿ ಶಾಲೆ/ಕಾಲೇಜುಗಳಲ್ಲಿನ ಸಿಬ್ಬಂದಿಗಳಿಗೆ ಈ ಮೇಲಿನ ನಿಯಮ ಅನ್ವಯವಾಗುತ್ತದೆ.

ಅನುದಾನಿತ ಸಿಬ್ಬಂದಿಗಳ ಸೇವಾ ಸೌಲಭ್ಯಗಳು ಅನುದಾನ ಸಹಿತವಾಗಿ ಅನುಮೋದನೆಗೊಂಡ ದಿನಾಂಕದಿಂದ ಅನ್ವಯವಾಗುತ್ತದೆ. ಆದುದರಿಂದ, 2006ರ ಪೂರ್ವದಲ್ಲಿ ಅನುದಾನರಹಿತವಾಗಿ ನೇಮಕಗೊಂಡ ಸಿಬ್ಬಂದಿಗಳು ದಿನಾಂಕ: 01.04.2006ರ ನಂತರ ಅನುದಾನಕ್ಕೆ ಒಳಪಟ್ಟಲ್ಲಿ ಅಂತಹ ಸಿಬ್ಬಂದಿಗಳು ಹೊಸ ಪಿಂಚಣಿ ಯೋಜನೆ(NPS) ವ್ಯಾಪ್ತಿಗೆ ಒಳಪಡುತ್ತಾರೆ. ಈ ಪಿಂಚಣಿ ಯೋಜನೆಯು ಸಂಪೂರ್ಣವಾಗಿ ಸ್ವ-ಇಚ್ಛಾ ನೆಲೆಯಲ್ಲಿ ಪಿಂಚಣಿ (Optional) ಜಾರಿಗೊಳಿಸುವುದರಿಂದ ಕಡ್ಡಾಯಗೊಳಿಸಲು ಅವಕಾಶವಿರುವುದಿಲ್ಲ.

ಇಪಿ 475 ಎಸ್‌ಇಎಸ್ 2024

(ಎಸ್. ಮಧು ಬಂಗಾರಪ್ಪ)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಸಚಿವರು.